ಸಾಧ್ಯವಾಗುವುದಿಲ್ಲ. ಅಂತಹ ಕಾಮಗಾರಿಗಳನ್ನು ನಂತರದ ವರ್ಷ ಪೂರ್ಣಗೊಳಿಸಲಾಗುತ್ತಿದೆ. ಇಂತಹ ಕಾಮಗಾರಿಗಳು ಮುಂದುವರೆದ ಕಾಮಗಾರಿಗಳೆಂದು ಪರಿಗಣಿಸಲ್ಪಡುತ್ತವೆ.

ಆ) ಬಂದಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕೈಗೊಳ್ಳುವ ಸಣ್ಣ ನೀರಾವರಿ ಕಾಮಗಾರಿಗಳು ಸಣ್ಣ ಪ್ರಮಾಣದಲ್ಲಿದ್ದು, ಅನುದಾನಕ್ಕೆ ತಕ್ಕಂತೆ ಆಯಾ ಸಾಲಿನ ಕ್ರಿಯಾ ಯೋಜನೆಯನ್ನು ತಯಾರಿಸಿ ಕೆರೆಗಳ ಅಭಿವೃದ್ಧಿ ಕಾಮಗಾರಿಯನ್ನು ಒಂದೇ ವರ್ಷದಲ್ಲಿ ಪೂರ್ಣಗೊಳಿಸಲಾಗುವುದು.

ಇ) ಸಣ್ಣ ನೀರಾವರಿ ಇಲಾಖೆಯಡಿ ಕಾಮಗಾರಿಗಳ ಅಂದಾಜು ಮೊತ್ತವನ್ನಾಧರಿಸಿ ಹಾಗೂ ಕಾಮಗಾರಿಯನ್ನು ನಿರ್ವಹಿಸಲು ಲಭ್ಯವಿರುವ ಸಮಯವನ್ನಾಧರಿಸಿ ಟೆಂಡರ್ ಕಾಮಗಾರಿಯನ್ನು ಪೂರ್ಣಗೊಳಿಸಲು ಕಾಲ ಮಿತಿ ನಿಗಧಿಪಡಿಸಲಾಗುತ್ತಿದೆ.

ಪಶ್ಚಿಮ ಘಟ್ಟ ಕಾರ್ಯಪಡೆ

864 (64); ಶ್ರೀ ಅರಬೈಲ್ ಶಿವರಾಮ್ ಹೆಬ್ಬಾರ್ (ಯಲ್ಲಾಪುರ)

ಅ) ಪಶ್ಚಿಮ ಘಟ್ಟ ಕಾರ್ಯಪಡೆ ಸಂಸ್ಥೆಯು ಸರ್ಕಾರದ ಅಧಿಕೃತ ಸಂಸ್ಥೆಯೇ;

ಆ) ಹಾಗಿದ್ದಲ್ಲಿ 2008 ರಿಂದ 2013 ರ ವರೆಗೆ ಈ ಸಂಸ್ಥೆಯ ಅಧ್ಯಕ್ಷರ ಹುದ್ದೆ ನಿರ್ವಹಣೆಗಾಗಿ ಸರ್ಕಾರದಿಂದ ಮಾಡಿರುವ ಖರ್ಚು-ವೆಚ್ಚಗಳೆಷ್ಟು? (ವಿವರ ನೀಡುವುದು)

ಶ್ರೀ ಬಿ. ರಮಾನಾಥ ರೈ (ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ಸರ್ಕಾರದ ಆದೇಶ ಸಂಖ್ಯೆ: ಅಪಜೀ 125 ಎಫ್ಎಪಿ 2008, ದಿನಾಂಕ: 04.09.2008 ರಂತೆ ಕರ್ನಾಟಕ ರಾಜ್ಯದ ಪಶ್ಚಿಮ ಘಟ್ಟದಲ್ಲಿರುವ ಮಹತ್ವದ ಸಸ್ಯ ಸಂಪತ್ತನ್ನು ಸಂರಕ್ಷಿಸಲು ಮತ್ತು ಈ ದಿಸೆಯಲ್ಲಿ ಸಂರಕ್ಷಣಾ ಅರಣ್ಯ ಚಟುವಟಿಕೆಗಳನ್ನು ಕೈಗೊಳ್ಳಲು 2008–09ನೇ ಸಾಲಿನಿಂದ ಐದು ವರ್ಷಗಳ ಅವಧಿಗೆ ರಚಿಸಲಾಗಿದ್ದ ಪಶ್ಚಿಮ ಘಟ್ಟಗಳ ಸಂರಕ್ಷಣೆ ಕಾರ್ಯಪಡೆ (ಸಹ್ಯಾದ್ರಿ) ಸಂಸ್ಥೆಯು ಸರ್ಕಾರದ ಅಧಿಕೃತ ಸಂಸ್ಥೆಯಾಗಿತ್ತು.

ಆ) ಸಂಸ್ಥೆಯ ಅಧ್ಯಕ್ಷರ ಹುದ್ದೆ ನಿರ್ವಹಣೆಗಾಗಿ ಆಗಿರುವ ವೆಚ್ಚ ವಿವರ ಈ ಕೆಳಗಿನಂತಿದೆ:–

ಕ್ರಮ ಸಂಖ್ಯೆ	ವರ್ಷ	ವೆಚ್ಚ (₹ ಗಳಲ್ಲಿ)
1	2008–09	2,19,122/–
2	2009–10	5,52,671/–
3	2010–11	4,86,657/–
4	2011–12	10,40,814/–
5	2012–13	10,15,260/–
6	2013–14	11,17,355/–